# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 332 |
| ಸದಸ್ಯರ ಹೆಸರು | : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 07.07.2023 |
| ಉತ್ತರಿಸುವವರು | : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಹಿರಿಯ ನಾಗರಿಕರಿಗೆ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳು ಯಾವುವು: (ಸಂಪೂರ್ಣ ವಿವರಗಳನ್ನು ನೀಡುವುದು)</td><td>ರಾಜ್ಯದಲ್ಲಿ ಹಿರಿಯ ನಾಗರಿಕರಿಗೆ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳು ವಿವರಗಳು ಅನುಬಂಧ-1 ರಲ್ಲಿ ಒದಗಿಸಲಾಗಿದೆ.</td></tr>
<tr><td>ಆ</td><td>ಪ್ರಸ್ತುತ ರಾಜ್ಯದಲ್ಲಿ ಇರುವ ಹಿರಿಯ ನಾಗರಿಕರ ಸಂಖ್ಯೆ ಎಷ್ಟು: ಹಾಗೂ 2022-23ನೇ ಸಾಲಿನಲ್ಲಿ ಹಿರಿಯ ನಾಗರಿಕರಿಗೆ ಸೌಲಭ್ಯಗಳನ್ನು ಕಲ್ಪಿಸಲು ವಿನಿಯೋಗಿಸಿರುವ ಅನುದಾನದ ವಿವರಗಳೇನು:</td><td>ರಾಜ್ಯದಲ್ಲಿ 2011 ಜನಗಣತಿ ಅನ್ವಯ ಹಿರಿಯ ನಾಗರಿಕರ ಸಂಖ್ಯೆ:57.91 ಲಕ್ಷ ಇದ್ದು, ಇಲಾಖೆಯಿಂದ ಹಿರಿಯ ನಾಗರಿಕರಿಗಾಗಿ ಕಲ್ಪಿಸಿರುವ ಯೋಜನಗಳಿಗಾಗಿ ವಿನಿಯೋಗಿಸಿರುವ ಅನುದಾನದ ವಿವರ ಈ ಕೆಳಕಂಡಂತೆ ಇರುತ್ತದೆ.<br>(ರೂ ಲಕ್ಷಗಳಲ್ಲಿ)
<table>
<tr><th rowspan="2">ಕ್ರ.ಸಂ</th><th rowspan="2">ಯೋಜನೆಗಳ ವಿವರ</th><th colspan="2">2022-23</th></tr>
<tr><th>ಬಿಡುಗಡೆ</th><th>ಖರ್ಚು</th></tr>
<tr><td>01</td><td>ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ</td><td>168.79</td><td>168.79</td></tr>
<tr><td>02</td><td>ಹಗಲು ಯೋಗಕ್ಷೇಮ ಕೇಂದ್ರ</td><td>227.06</td><td>227.06</td></tr>
<tr><td>03</td><td>ವೃದ್ಧಾಶ್ರಮಗಳು</td><td>368.00</td><td>368.00</td></tr>
</table></td></tr>
<tr><td>ಇ</td><td>ರಾಜ್ಯದಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳೇನು: ಹಾಗೂ ಸದರಿ ಉದ್ದೇಶಕ್ಕಾಗಿ ಕಳೆದ 03 ವರ್ಷಗಳಲ್ಲಿ ವಿನಿಯೋಗಿಸಿರುವ ಅನುದಾನದ ವಿವರಗಳೇನು?</td><td>ರಾಜ್ಯದಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳಿಗಾಗಿ ಕಳೆದ 03 ವರ್ಷಗಳಲ್ಲಿ ವಿನಿಯೋಗಿಸಿರುವ ಅನುದಾನದ ವಿವರಗಳನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ.</td></tr>
</table>

ಮಮಇ 127 ಪಿಹೆಚ್‌ಪಿ 2023

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.

## ಅನುಬಂಧ-1

## ಹಿರಿಯ ನಾಗರಿಕರಿಗಾಗಿ ರಾಜ್ಯ ಸರ್ಕಾರವು ಜಾರಿಗೊಳಿಸುತ್ತಿರುವ ಯೋಜನೆಗಳು

### ಹಿರಿಯ ನಾಗರಿಕರ ವೃದ್ಧಾಶ್ರಮ:

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ಪ್ರಸ್ತುತ ವಾರ್ಷಿಕ ರೂ.12.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಮಂಜೂರು ಮಾಡಲಾಗುತ್ತಿದೆ.

ರಾಜ್ಯದ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 9 ಕಂದಾಯ ಉಪ ವಿಭಾಗದಲ್ಲಿ ವೃದ್ಧಾಶ್ರಮಗಳನ್ನು ನಡೆಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

### ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಬೆಳಗಾವಿ, ಹಾವೇರಿ, ಉತ್ತರಕನ್ನಡ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 26 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

### ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಗಳು:

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಮಂಜೂರಾತಿ ನೀಡಲಾಗಿದ್ದು, ಪ್ರಸ್ತುತ ರಾಮನಗರ, ದಕ್ಷಿಣ ಕನ್ನಡ, ಉಡುಪಿ, ತುಮಕೂರು, ಉತ್ತರ ಕನ್ನಡ ಹಾಗೂ ಕೋಲಾರ ಜಿಲ್ಲೆಗಳು ಹೊರತುಪಡಿಸಿ ಉಳಿದ 24 ಜಿಲ್ಲೆಗಳಲ್ಲಿ 25 ಹಗಲು ಯೋಗಕ್ಷೇಮ ಕೇಂದ್ರಗಳು ಕಾರ್ಯನಿರ್ವಹಿಸಿರುತ್ತದೆ. ಪ್ರತಿ ಕೇಂದ್ರದಲ್ಲಿ ಸುಮಾರು 50-150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ಪ್ರಸ್ತುತ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

**ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:**

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.

**ಹಿರಿಯ ನಾಗರಿಕರಿಗೆ ಬಸ್ ಪ್ರಮಾಣ ದರದಲ್ಲಿ ಶೇ.25 ರಷ್ಟು ರಿಯಾಯಿತಿ:**

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವೋಲ್ವೋ ಬಸ್ ಹೊರತುಪಡಿಸಿ ಎಲ್ಲಾ ಬಸ್‌ಗಳ ಪ್ರಯಾಣದರದಲ್ಲಿ ಶೇ.25ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿದೆ.

**ತಂದೆ ತಾಯಿಯರ ಮತ್ತು ಹಿರಿಯ ನಾಗರಿಕರ ಪಾಲನೆ, ಪೋಷಣೆ ಹಾಗೂ ಕಲ್ಯಾಣ ಅಧಿನಿಯಮ 2007**

ಈ ಕಾಯ್ದೆಯಡಿ ಹಿರಿಯ ನಾಗರಿಕರ ಪಾಲನೆ, ಪೋಷಣೆ ಮತ್ತು ರಕ್ಷಣೆಗಾಗಿ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ದೌರ್ಜನ್ಯ, ಶೋಷಣೆ, ಮೋಸ ವಂಚನೆಗೆ ಒಳಪಟ್ಟ ಹಿರಿಯ ನಾಗರಿಕರು ಕಾಯ್ದೆಯಡಿ ರಚಿತವಾಗಿರುವ ಆಯಾ ಉಪವಿಭಾಗದ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ನಿರ್ವಹಣಾ ನ್ಯಾಯ ಮಂಡಳಿಯಲ್ಲಿ ಪ್ರಕರಣ ದಾಖಲಿಸಿ ನ್ಯಾಯ ಪಡೆಯಬಹುದಾಗಿದೆ. ನಿರ್ವಹಣಾ ನ್ಯಾಯ ಮಂಡಳಿಯ ತೀರ್ಪು ತಮಗೆ ವಿರುದ್ಧವಾಗಿದ್ದಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಮೇಲ್ಮನವಿ ನ್ಯಾಯಮಂಡಳಿಯಲ್ಲಿ ನ್ಯಾಯವನ್ನು ಪಡೆಯಬಹುದಾಗಿದೆ.

**ವೃದ್ಧಾಪ್ಯ ವೇತನ**

- **ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ**

  ಈ ಯೋಜನೆಯಡಿ 60 ರಿಂದ 64 ವರ್ಷದೊಳಗಿನ ಹಿರಿಯ ನಾಗರಿಕರ ಫಲಾನುಭವಿಗಳಿಗೆ ಮಾಹೆಯಾನ ರೂ.600/-ಗಳ ಪಿಂಚಣಿಯನ್ನು ನೀಡಲಾಗುತ್ತಿದೆ. 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರ ಫಲಾನುಭವಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಒಟ್ಟು ಮಾಹೆಯಾನ ರೂ. 1200/-ಗಳ ಪಿಂಚಣಿ ನೀಡಲಾಗುತ್ತಿದೆ.

- **ಸಂಧ್ಯಾ ಸುರಕ್ಷಾ ಯೋಜನೆ**

  ಕಂದಾಯ ಇಲಾಖೆಯಿಂದ ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ.97 ಎಂ.ಎಸ್.ಟಿ.:2007 ದಿನಾಂಕ:02.07.2007ರನ್ವಯ ಜಾರಿಯಲ್ಲಿದ್ದು, ಹಾಲಿ ಈ ಯೋಜನೆಯಡಿ ಸಾಮಾಜಿಕ ಭದ್ರತಾ ರೂಪದಲ್ಲಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ರೂ.1200/-ಗಳ ಆರ್ಥಿಕ ಸಹಾಯ ಧನವನ್ನು ಮಾಸಿಕವಾಗಿ ನೀಡಲಾಗುತ್ತಿದೆ.

# ಅನುಬಂಧ-2

ಕಳೆದ 03 ವರ್ಷಗಳಲ್ಲಿ ರಾಜ್ಯದಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳಿಗೆ ಒದಗಿಸಿರುವ ಅನುದಾನದ ವಿವರ

(ರೂ ಲಕ್ಷಗಳಲ್ಲಿ)

| ಕ್ರಸಂ | ಯೋಜನೆಯ ವಿವರಗಳು | 2020-21 | | 2021-22 | | 2022-23 | |
|---|---|---|---|---|---|---|---|
| | | ಬಿಡುಗಡೆ | ಖರ್ಚು | ಬಿಡುಗಡೆ | ಖರ್ಚು | ಬಿಡುಗಡೆ | ಖರ್ಚು |
| 01 | ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ | 172.48 | 172.48 | 149.38 | 149.38 | 168.79 | 168.79 |
| 02 | ಹಗಲು ಯೋಗಕ್ಷೇಮ ಕೇಂದ್ರ | 246.25 | 246.25 | 124.56 | 122.04 | 227.06 | 227.06 |
| 03 | ವೃದ್ಧಾಶ್ರಮಗಳು | 264.00 | 264.00 | 304.00 | 304.00 | 368.00 | 368.00 |